# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:07/05/2021 ರಂದು ಬೆಳಿಗ್ಗೆ:11.00 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

## ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ಕೋವೀಡ್ ವ್ಯಾಕ್ಸಿನ್ ಲಸಿಕೆಗಳನ್ನು ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವ ಬಗ್ಗೆ.
2. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವ ಬಗ್ಗೆ.
3. ಕುಡಿಯುವ ನೀರು ಸರಬರಾಜು ಬಗ್ಗೆ,
4. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
5. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
6. ಬೀದಿ ದೀಪಗಳ ನಿರ್ವಹಣೆಯ ಬಗ್ಗೆ,
7. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ,

## ವಾರ್ಡ್ ನಂ-192 ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಸೂಚಿಸಿರುವವರ ವಿವರ

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | ಹಾಜರಾಗಿರುತ್ತಾರೆ |
| 4 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | ಹಾಜರಾಗಿರುತ್ತಾರೆ |
| 5 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಾಗಿರುತ್ತಾರೆ |
| 6 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | ಹಾಜರಾಗಿರುತ್ತಾರೆ |
| 7 | ಶ್ರೀ.ಸಂತೋಷ್ ದೀಪು | ಅರಣ್ಯ | ಹಾಜರಾಗಿರುತ್ತಾರೆ |
| 8 | ಶ್ರೀ.ಮಂಜುನಾಥ್ | ಸರ್ಕಲ್ ಇನ್ಸ್‌ಪೆಕ್ಟರ್, ಬೇಗೂರು | ಗೈರುಹಾಜರು |
| 9 | ಶ್ರೀ.ಬಾಲಾಜಿ | ಸ.ಕಾ.ನಿ.ಅ. (ಎಸ್.ಡಬ್ಲ್ಯೂ.ಡಿ) | ಗೈರುಹಾಜರು |
| 10 | ಶ್ರೀ.ರಮೇಶ್ | ಸ.ಕಾ.ನಿ.ಅ. (ರ.ಮು.ಸೌ) | ಗೈರುಹಾಜರು |

Scanned by CamScanner

| | | | |
|---|---|---|---|
| 11 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 12 | ಶ್ರೀ.ರವಿ | ಬೀದಿ ದೀಪ ನಿರ್ವಹಣೆ | ಗೈರುಹಾಜರು |
| 13 | ಶ್ರೀ.ನರಸಪ್ಪ | ತೋಟಗಾರಿಕೆ ಇಲಾಖೆ | ಗೈರುಹಾಜರು |
| 14 | ಶ್ರೀ.ರಂಗಪ್ಪ ಸ.ಅ. | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಗೈರುಹಾಜರು |
| 15 | ಶ್ರೀ.ಸ್ವಾಮಿ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 16 | ಶ್ರೀ.ಎಸ್.ಸಚಿನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 17 | ಶ್ರೀ.ಮುರಳಿ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 18 | ಶ್ರೀ.ಗೋವಿಂದರಾಜು | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 19 | ಶ್ರೀ.ಸುನಿಲ್ ಕುಮಾರ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 20 | ಶ್ರೀ.ಅರವಿಂದ | ಸಾರ್ವಜನಿಕರು ಅಭಿಯಂತರರು | ಹಾಜರಾಗಿರುತ್ತಾರೆ |
| 21 | ಶ್ರೀ.ವೇಣುಗೋಪಾಲ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 22 | ಶ್ರೀ.ಮಂಜುನಾಥ್.ಎನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |

## ಸಭೆಯ ನಡಾವಳಿಗಳು

1. ಕೋವಿಡ್- 19 ಕರೋನಾ ರೋಗವು 2ನೇ ಹಂತದಲ್ಲಿ ಹರಡುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ಸಾರ್ವಜನಿಕರು ಕೋವಿಡ್ ವ್ಯಾಕ್ಸಿನ್ ಚುಚುಮದ್ದು ನೀಡಲು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿದರು.

2. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವಂತೆ ಅಧ್ಯಕ್ಷರು ವೈದ್ಯಾಧಿಕಾರಿರವರಿಗೆ ಮಾನ್ಯ ವಾರ್ಡ್ ಕಮಿಟಿ ಅಧ್ಯಕ್ಷರು ಸೂಚಿಸಿದರು
ಕ್ರಮ: ವೈದ್ಯಾಧಿಕಾರಿಗಳು, ಬೇಗೂರು, ಪ್ರಾಥಮಿಕ ಆರೋಗ್ಯ ಕೇಂದ್ರ.

2. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಬೀದಿದೀಪಗಳು ಹಾಳಾಗಿದ್ದು, ದುರಸ್ತಿಯಲ್ಲಿದ್ದು, ಅವುಗಳನ್ನು ಸರಿಪಡಿಸಲು ಮತ್ತು ಹೊಸದಾಗಿ ವಿದ್ಯುತ್ ಬೀದಿದೀಪಗಳು ಅವಶ್ಯಕತೆ ಇದ್ದು, ಬೀದಿದೀಪಗಳನ್ನು ಅಳವಡಿಸಲು ಬೀದಿದೀಪದ ಎ.ಇ ರವರಿಗೆ ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಿದರು.

3. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಪ್ರದೇಶಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಈ ಬಗ್ಗೆ ದೂರು ಬರದಿರುವಂತೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ನೀರು ಸರಬರಾಜು ಗುತ್ತಿಗೆದಾರರನ್ನು ಕರೆದು ಸೂಚನೆ ನೀಡುವಂತೆ ಹಾಗೂ ವಾಟರ್‌ಮ್ಯಾನ್‌ಗಳು ಪ್ರತಿದಿನ ಈ ಬಗ್ಗೆ ವರಧಿಯನ್ನು ವಾರ್ಡ್‌ನ ಸಹಾಯಕ ಅಭಿಯಂತರರು ಪಡೆಯುವಂತೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಹಿಂದಿನ ಸಭೆಯಲ್ಲಿ ಸೂಚಿಸಿದ್ದರು ಅದರ ವಿವರ ನೀಡುವಂತೆ ವಾರ್ಡ್‌ನ ಸಹಾಯಕ ಅಭಿಯಂತರರು ರವರ ಜೊತೆ ಸಭೆಯಲ್ಲಿ ಚರ್ಚಿಸಿದರು

ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192

Scanned by CamScanner

4. ಸದರಿ ವಾರ್ಡ್‌ನ ಪರಿವೀಕ್ಷಣಾ ಸಮಯದಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸದಿರುವ ಬಗ್ಗೆ ಹಾಗೂ ದೈನಂದಿನ ಕಸ ಸಂಗ್ರಹಣೆ ಮಾಡದಿರುವ ಬಗ್ಗೆ ಹಾಗೂ ಸಾರ್ವಜನಿಕರು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಹಾಗೂ ಘನತ್ಯಾಜ್ಯದ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡಲು ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ ನಿರ್ವಹಣಾ ಘಟಕ)

5. ವಾರ್ಡ್ ವ್ಯಾಪ್ತಿಯಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಗುರುತಿಸಿ ಮುಚ್ಚುವ ಕಾರ್ಯವನ್ನು ಮುಂದುವರೆಸಲು ಸಾರ್ವಜನಿಕರು ಕೋರಿಕೊಂಡಿರುತ್ತಾರೆ.

ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192, ಬೇಗೂರು, ಬಿ.ಬಿ.ಎಂ.ಪಿ

6. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯ ಮಧ್ಯಭಾಗದಲ್ಲಿ ವಿದ್ಯುತ್ ಕಂಬಗಳು ಇದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಸದರಿ ವಿದ್ಯುತ್ ಕಂಬಗಳನ್ನು ಸಾರ್ವಜನಿಕರಿಗೆ ತೊಂದರೆಯಾಗದ ಹಾಗೆ ರಸ್ತೆಯ ಒಂದು ಬದಿಗೆ ವರ್ಗಾಹಿಸಲು ಬೆಸ್ಕಂ ಅಧಿಕಾರಿಗಳಿಗೆ ತಮ್ಮ ಕಛೇರಿಯ ಅನುದಾನದಿಂದ ಕಾಮಗಾರಿ ನಿರ್ವಹಿಸಿಕೊಡಲು ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಇ.ಇ ಬೆಸ್ಕಂ ಅವರಿಗೆ ಸೂಚಿಸಲಾಯಿತು.

7. ಮಳೆಗಾಲವು ಪ್ರಾರಂಭವಾಗುತ್ತಿರುವುದರಿಂದ ತಾತ್ಕಾಲಿಕ ನಿಯಂತ್ರಣಾ ಕೊಠಡಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೇಗೂರು ಉಪವಿಭಾಗ ರವರಿಗೆ ನೋಡಲ್ ಅದಿಕಾರಿಗಳು ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದ್ದರು.

8. ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಅಗೆದು ದುರಸ್ಥಿಗೊಳಿಸಿದ್ದು, ರಸ್ತೆಯ ಪಕ್ಕದ ಚರಂಡಿಗಳಲ್ಲಿ ತುಂಬಿರುವ ಹೆಚ್ಚುವರಿ ಮಣ್ಣನ್ನು ತೆಗೆದು ಮಳೆಯ ನೀರು ಸರಾಗವಾಗಿ ಚರಂಡಿಯಲ್ಲಿ ಹರಿಯುವಂತೆ ಮಾಡಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಅನುಕೂಲ ಮಾಡಿಕೊಡಬೇಕಾಗಿ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ನೋಡಲ್ ಅದಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

9. ವಾರ್ಡ್‌ನಲ್ಲಿ ರಸ್ತೆಗಳು ಗುಂಡಿ ಬಿದ್ದಿದ್ದು ಸಾರ್ವಜನಿಕರಿಗೆ ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ ಎಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ವಾರ್ಡ್ ಸಮಿತಿಯಲ್ಲಿ ಮನವಿ ಮಾಡಿಕೊಂಡರು. ಸಭೆಯಲ್ಲಿ ಹಾಜರಿದ್ದ ನೋಡಲ್ ಅಧಿಕಾರಿಗಳು ಸದರಿ ಸಮಸ್ಯೆಯ ಬಗ್ಗೆ ಕ್ರಮ ಕೈಗೊಂಡು ಸಮಸ್ಯೆಯನ್ನು ಬಗೆಹರಿಸಿಕೊಡುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

Scanned by CamScanner

10. ವಾರ್ಡ್ ವ್ಯಾಪ್ತಿಯಲ್ಲಿ ಲಾಕ್‌ಡೌನ್ ಇರುವ ಪ್ರದೇಶದಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಬಗೆಹರಿಸಿಕೊಡಲು ಗಂಬೀರವಾಗಿ ಪರಿಗಣಿಸಿ ಪರಿಹರಿಸಿಕೊಡಬೇಕೆಂದು ನೋಡಲ್ ಅಧಿಕಾರಿಗಳು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

**ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

7/5/2021
ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ

Scanned by CamScanner